## ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಜೂನ್ 4ರಂದು ರಾಜರ್ಷಿ ನಾಲ್ವಡಿ ಶ್ರೀಕೃಷ್ಣರಾಜ ಒಡೆಯರ್ ಅವರ ಜಯಂತ್ಯುತ್ಸವ

**ಬೆಂಗಳೂರು**: ಕನ್ನಡ ಸಾಹಿತ್ಯ ಪರಿಷತ್ತು ತನ್ನ ಸಂಸ್ಥಾಪಕರಾದ ರಾಜರ್ಷಿ ನಾಲ್ವಡಿ ಶ್ರೀಕೃಷ್ಣರಾಜ ಒಡೆಯರ್ ಅವರ 140ನೆಯ ಜಯಂತ್ಯುತ್ಸವವನ್ನು ಜೂನ್ 4, 2024ರಂದು ಸಂಜೆ 5-00 ಗಂಟೆಗೆ ಶ್ರೀಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಏರ್ಪಡಿಸಿದೆ. **'ಮಾದರಿ ಮೈಸೂರು ರಾಜ್ಯ**'ವನ್ನು ರೂಪಿಸಿದ ನಾಲ್ವಡಿಯವರ ಆಳ್ವಿಕೆಯಲ್ಲಿ ಕಲೆ, ಸಂಸ್ಕೃತಿಗೆ ವಿಶೇಷ ಮನ್ನಣೆಗಳು ದೊರಕಿದವು. ಪ್ರಜಾಪ್ರತಿನಿಧಿ ಸಭೆಯನ್ನು ಶಾಸನಬದ್ದ ಸಂಸ್ಥೆಯನ್ನಾಗಿ ಮಾಡಿದ ಅವರು ಮಿಲ್ಲರ್ ಆಯೋಗದ ಮೂಲಕ ಮೀಸಲಾತಿಯನ್ನು ಜಾರಿಗೆ ತಂದು 'ಸಾಮಾಜಿಕ ಕಾನೂನು'ಗಳ ಹರಿಕಾರ ಎನ್ನಿಸಿಕೊಂಡರು. ಕನ್ನಡ ಸಾಹಿತ್ಯ ಪರಿಷತ್ತು ಕೂಡ ಅವರ ಕಾಲದಲ್ಲಿಯೇ ಸ್ಥಾಪಿತವಾಯಿತು. ಮೈಸೂರು ವಿಶ್ವವಿದ್ಯಾಲಯ ಸೇರಿದಂತೆ ಅವರು ಸ್ಥಾಪಿಸಿರುವ ಸಂಸ್ಥೆಗಳ ಪಟ್ಟಿ ಬಹಳ ದೊಡ್ಡದಾಗಿದೆ. ಪರಿವರ್ತನೆಯ ಹರಿಕಾರರಾದ ನಾಲ್ವಡಿಯವರನ್ನು ಕನ್ನಡ ಸಾಹಿತ್ಯ ಪರಿಷತ್ತು ಕೃತಜ್ಞತೆಯಿಂದ ಸ್ಮರಿಸಿ ಕೊಳ್ಳಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿಯವರು ವಹಿಸಲಿದ್ದು, ಸಾಮಾಜಿಕ ಇತಿಹಾಸಕಾರರಾದ **ಶ್ರೀ ಧರ್ಮೇಂದ್ರ ಕುಮಾರ್** ಅವರು ನಾಲ್ವಡಿ ಶ್ರೀಕೃಷ್ಣರಾಜ ಒಡೆಯರ್ ಅವರ **ಜೀವನ ಮತ್ತು ಸಾಧನೆಗಳ ಕುರಿತು** ವಿಶೇಷ ಉಪನ್ಯಾಸವನ್ನು ನೀಡಲಿದ್ದು, ಹಿರಿಯ ವಿಜ್ಞಾನ ಬರಹಗಾರರೂ ಮತ್ತು ನಾಲ್ವಡಿ ಶ್ರೀಕೃಷ್ಣರಾಜ ಒಡೆಯರ್ ಅವರ ಕುರಿತು ವಿಶೇಷ ಅಧ್ಯಯನ ಮಾಡಿದವರೂ ಆದ **ಡಾ.ಟಿ.ಆರ್.ಅನಂತರಾಮು** ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸಾಂಸ್ಕೃತಿಕ ಮಹತ್ವದ ಈ ಕಾರ್ಯಕ್ರಮದ ವಿವರಗಳನ್ನು ನಿಮ್ಮ ಪತ್ರಿಕೆಯಲ್ಲಿ ಪ್ರಕಟಿಸಿ ಹೆಚ್ಚಿನ ಪ್ರೇಕ್ಷಕರು ಬರಲು ಅನುಕೂಲ ಮಾಡಿ ಕೊಡಬೇಕಾಗಿ ವಿನಂತಿ. ಕಾರ್ಯಕ್ರಮಕ್ಕೆ ನಿಮ್ಮ ವರದಿಗಾರರನ್ನು ಮತ್ತು ಛಾಯಾಗ್ರಾಹಕರನ್ನು ಕಳುಹಿಸಿ ಕೊಡಬೇಕಾಗಿ ಕೋರಿಕೆ.

**ಎನ್.ಎಸ್.ಶ್ರೀಧರ ಮೂರ್ತಿ**

ಸಂಚಾಲಕರು, ಪ್ರಕಟಣಾ ವಿಭಾಗ, ಕನ್ನಡ ಸಾಹಿತ್ಯ ಪರಿಷತ್ತು